ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ನಂ.17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ ಬೆಂಗಳೂರು 560 001. ದೂ. 080-22028032/34/ಫ್ಯಾಕ್ಸ್ 22028041

ದಿನಾಂಕ : 10-02-2015

**ಪತ್ರಿಕಾ ಪ್ರಕಟಣೆ**

# ತೂಕದಲ್ಲಿ ಮೋಸ : ನಾಲ್ಕು ಸಕ್ಕರೆ ಕಾರ್ಖಾನೆಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ

**ಬೆಂಗಳೂರು, ಫೆಬ್ರವರಿ 10 (ಕರ್ನಾಟಕ ವಾರ್ತೆ)**

ರೈತರಿಗೆ ಕಬ್ಬು ತೂಕದಲ್ಲಿ ಮೋಸ ಮಾಡಿರುವ ಬಾಗಲಕೋಟೆ ಜಿಲ್ಲೆಯ ನಾಲ್ಕು ಸಕ್ಕರೆ ಕಾರ್ಖಾನೆಗಳ ಮೇಲೆ ಕ್ರಿಮಿನಲ್ ಕೇಸ್ ದಾಖಲು ಮಾಡುವಂತೆ ಜಿಲ್ಲಾಧಿಕಾರಿಯವರಿಗೆ ಸೂಚಿಸಲಾಗಿದೆ ಎಂದು ಸಕ್ಕರೆ ಸಚಿವ ಹೆಚ್.ಎಸ್. ಮಹದೇವಪ್ರಸಾದ್ ಅವರು ತಿಳಿಸಿದರು.

ವಿಧಾನ ಪರಿಷತ್‌ನಲ್ಲಿಂದು ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಮಹಾಂತೇಶ್ ಶಿವಾನಂದ ಕೌಜಲಗಿ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ಕಬ್ಬಿನ ತೂಕದಲ್ಲಿ ಶೇಕಡ 1 ರಷ್ಟು ಬೈಂಡಿಂಗ್ ಮೆಟಿರಿಯಲ್ ಕಡಿತಗೊಳಿಸಲು ಅವಕಾಶವಿದೆ. ಆದರೆ ಬಾಗಲಕೋಟೆಯ ಗೋದಾವರಿ ಬಯೋರೈಫೈನರೀಸ್, ಲಿಮಿಟೆಡ್ ನಿರಾಣಿ ಶುಗರ್ಸ್ ಲಿಮಿಟೆಡ್ ಪ್ರಭುಲಿಂಗೇಶ್ವರ ಶುಗರ್ಸ್ ಮತ್ತು ಇಂಡಿಯನ್ ಕೇನ್ ಪವರ್ ಲಿಮಿಟೆಡ್ ಕಾರ್ಖಾನೆಗಳಲ್ಲಿ ಕಬ್ಬಿನ ತೂಕದಲ್ಲಿ ಶೇಕಡ 2.5 ರಷ್ಟು ಕಡಿತಗೊಳಿಸಿರುವುದು ಕಂಡು ಬಂದಿರುವ ಹಿನ್ನೆಲೆಯಲ್ಲಿ ಆ ಜಿಲ್ಲೆಯ ಜಿಲ್ಲಾಧಿಕಾರಿವರು ಈಗಾಗಲೇ ಈ ನಾಲ್ಕೂ ಸಕ್ಕರೆ ಕಾರ್ಖಾನೆಗಳಿಗೆ ನೋಟೀಸ್ ನೀಡಿದ್ದಾರೆ ಎಂದರು.

ಹಾಗೆಯೇ ರೈತರು ಕಟಾವು ಗ್ಯಾಂಗ್ ಹಾಗೂ ಸಾಗಣಿದಾರರಿಗೆ ಯಾವುದೇ ಕಾರಣಕ್ಕೂ ಹಣವನ್ನು ಸಂದಾಯ ಮಾಡುವಂತಿಲ್ಲ. ಆದಾಗ್ಯೂ ಅವರು ಹಣಕ್ಕೆ ಬೇಡಿಕೆ ಸಲ್ಲಿಸಿದರೆ ರೈತರು ನೇರವಾಗಿ ಕಾರ್ಖಾನೆಯವರ ಗಮನಕ್ಕೆ ತರಬೇಕು. ಈ ಕುರಿತು ರೈತರಿಗೆ ಅರಿವು ಮೂಡಿಸುವಂತ ಫಲಕವನ್ನು ಹಾಕುವಂತೆ ಸಕ್ಕರೆ ಕಾರ್ಖಾನೆಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಪ್ರಸಕ್ತ ಸಾಲಿನಲ್ಲಿ 223 ಲಕ್ಷ ಮೆಟ್ರಿಕ್ ಟನ್ ಕಬ್ಬನ್ನು ಅರೆಯಲಾಗಿದ್ದು, ಎಫ್.ಆರ್.ಪಿ. ಪ್ರಕಾರ 4,35,802 ಕೋಟಿ ರೂ. ಹಣವನ್ನು ಪಾವತಿ ಮಾಡಬೇಕಿದ್ದು ಈಗಾಗಲೇ 2826 ಕೋಟಿ ರೂ ಹಣವನ್ನು ಪಾವತಿ ಮಾಡಲಾಗಿದೆ. ಕಬ್ಬು ಸರಬರಾಜು ಮಾಡಿದ 14 ದಿನಗಳ ಅವಧಿಯೊಳಗೆ ಕಬ್ಬು ಬಿಲ್ಲನ್ನು ಪಾವತಿಸದಿದ್ದಲ್ಲಿ, ವಿಳಂಬದ ಅವಧಿಗೆ ಬಾಕಿ ಮೊತ್ತದ ಮೇಲೆ ಶೇಕಡ 15 ರಷ್ಟು ಬಡ್ಡಿ ಸೇರಿಸಿ ರೈತರಿಗೆ ಪಾವತಿಸಬೇಕಾಗುತ್ತದೆ ಎಂದು ಸಚಿವರು ಸದಸ್ಯರ ಪ್ರಶ್ನೆಗೆ ಉತ್ತರಿಸಿದರು.

**ಪಹೊ:ಬಿಜಿಪಿ:ಜಿಪಿಆರ್.**

# ಶಿರಾಡಿ ಘಾಟ್ : ಮೇ ತಿಂಗಳೊಳಗೆ ಮೊದಲ ಹಂತದ ಕಾಮಗಾರಿ ಪೂರ್ಣ

**ಬೆಂಗಳೂರು, ಫೆಬ್ರವರಿ 10 (ಕರ್ನಾಟಕ ವಾರ್ತೆ)**

ದುರಸ್ತಿ ಕಾಮಗಾರಿಯನ್ನು ಕೈಗೊಳ್ಳಲಾಗಿರುವ ಶಿರಾಡಿ ಘಾಟ್‌ನ ಮೊದಲ ಹಂತದ ರಸ್ತೆ ಕಾಮಗಾರಿಯನ್ನು ಮೇ ತಿಂಗಳೊಳಗೆ ಪೂರ್ಣಗೊಳಿಸಲಾಗುವುದೆಂದು ಲೋಕೋಪಯೋಗಿ ಸಚಿವ ಡಾ. ಹೆಚ್. ಸಿ. ಮಹದೇವಪ್ಪ ಅವರು ಭರವಸೆ ನೀಡಿದರು.

ವಿಧಾನ ಪರಿಷತ್ತಿನಲ್ಲಿಂದು ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಎಂ. ಶ್ರೀವಾಸ್ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, 26 ಕಿ.ಮೀ ಉದ್ದದ ಶಿರಾಡಿ ಘಾಟ್ ರಸ್ತೆಯನ್ನು 13 ಕಿ.ಮೀ ನಂತೆ ಎರಡು ಭಾಗಗಳನ್ನಾಗಿ ಮಾಡಿಕೊಂಡು ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ. ಈಗಾಗಲೇ ಕಾಮಗಾರಿಯನ್ನು ಪ್ರಾರಂಭಿಸಲಾಗಿರುವ ಮೊದಲ ಹಂತದ 13 ಕಿ.ಮೀ ಉದ್ದದ ರಸ್ತೆ ಕಾಮಗಾರಿಯನ್ನು ಮೇ ತಿಂಗಳೊಳಗೆ ಪೂರ್ಣಗೊಳಿಸಲಾಗುವುದು. ಹಾಗೂ ಉಳಿದ 13 ಕಿ.ಮೀ ಉದ್ದದ ರಸ್ತೆಯನ್ನು ಮುಂದಿನ ಆರು ತಿಂಗಳಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ ಎಂದು ತಿಳಿಸಿದರು.

ಈ ಪ್ರದೇಶದಲ್ಲಿ 500 ಎಂ.ಎಂ. ನಷ್ಟು ಮಳೆ ಬೀಳುವುದರಿಂದ ಹಾಗೂ ಬಿದ್ದ ಮಳೆ ನೀರು ಮೋರಿಗಳಿಗೆ ಹರಿದು ಹೋಗಲು ಸೂಕ್ತ ಡ್ರೈನೇಜ್ ಇಲ್ಲದಿರುವುದು ಹಾಗೂ ಈ ಮಾರ್ಗದಲ್ಲಿ ಬಾರಿ ವಾಹನಗಳ ಓಡಾಟ ಹೆಚ್ಚಾಗಿರುವುದರಿಂದ ಈ ರಸ್ತೆಯು ಪದೇ ಪದೇ ದುರಸ್ತಿಗೆ ಒಳಗಾಗುತ್ತದೆ. ಆದ್ದರಿಂದ ಈ ರಸ್ತೆಯನ್ನು ಸುಭದ್ರವಾಗಿ ನಿರ್ಮಾಣ ಮಾಡುವ ಉದ್ದೇಶದಿಂದ ಕೆಲವು ಭಾಗಗಳಲ್ಲಿ ಸಿಮೆಂಟ್ ಕಾಂಕ್ರಿಟ್ ಅನ್ನು ಹಾಕಲಾಗುತ್ತಿರುವುದಲ್ಲದೆ ರಸ್ತೆ ಅಗಲೀಕರಣವನ್ನು ಮಾಡಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

**ಪಹೊ:ಬಿಜಿಪಿ:ಜಿಪಿಆರ್.**

# ‘ಕೃಷಿ ಭಾಗ್ಯ’ : ಫಲಾನುಭವಿಗಳಿಗೆ ಮೂರು ಹಂತಗಳಲ್ಲಿ ಹಣ ಬಿಡುಗಡೆ

**ಬೆಂಗಳೂರು, ಫೆಬ್ರವರಿ 10 (ಕರ್ನಾಟಕ ವಾರ್ತೆ)**

**ಕೃಷಿ ಭಾಗ್ಯ ಯೋಜನೆಯಡಿ ಆಯ್ಕೆಯಾದ ಫಲಾನುಭವಿ ರೈತರಿಗೆ ಮೂರು ಹಂತದಲ್ಲಿ ಹಣ ಬಿಡುಗಡೆ ಮಾಡಲಾಗುವುದೆಂದು ಕೃಷಿ ಸಚಿವ ಶ್ರೀ ಕೃಷ್ಣಭೈರೇಗೌಡ ಅವರು ತಿಳಿಸಿದರು.**

**ವಿಧಾನ ಪರಿಷತ್ತಿನಲ್ಲಿಂದು ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಕವಟಗಿ ಮಠ ಮಹಾಂತೇಶ ಮಲ್ಲಿಕಾರ್ಜುನ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ಈ ಯೋಜನೆಯಡಿ ಈಗಾಗಲೇ ರೈತರ ಹೆಸರಿನಲ್ಲಿ ಅನುದಾನವನ್ನು ಕಾಯ್ದಿರಿಸಿಕೊಳ್ಳಲಾಗಿದ್ದು, ರೈತರಿಗೆ ಇಲಾಖೆಯ ಮಾರ್ಗಸೂಚಿಯನ್ವಯ ಮೂರು ಹಂತದಲ್ಲಿ ಹಣವನ್ನು ಬಿಡುಗಡೆ ಮಾಡಲಾಗುತ್ತಿದೆ ಎಂದರು.**

**ಮಳೆಯನ್ನು ಅವಲಂಬಿಸಿ ವ್ಯವಸ್ಯಾಯ ಮಾಡುತ್ತಿರುವ ರೈತರಿಗಾಗಿ ಕೃಷಿ ಭಾಗ್ಯ ಯೋಜನೆಯನ್ನು ಹಮ್ಮಿಕೊಂಡಿರುವ ಸರ್ಕಾರವು ಅನುದಾನವನ್ನು ಸಮರ್ಪಕವಾಗಿ ಒದಗಿಸಿದ್ದು ಅನುದಾನದ ಸಮಸ್ಯೆ ಇರುವುದಿಲ್ಲ.**

**ವೈಯಕ್ತಿಕವಾಗಿ ಸವಲತ್ತು ಪಡೆಯುವ ಸಾಮಾನ್ಯ ವರ್ಗದ ರೈತರಿಗೆ ಶೇಕಡ 50 ರಷ್ಟು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಶೇಕಡ 90 ರಷ್ಟು ಸಹಾಯಧನವನ್ನು ನೀಡಲಾಗುತ್ತಿದೆ ಎಂದರು.**

**ವಿಜ್ಞಾನಿಗಳ ಶಿಫಾರಸ್ಸಿನ್ವಯ ಏಳು ವಲಯಗಳಿಂದ ಮಳೆ ಆಧಾರಿತ ಪ್ರದೇಶವಾದ 107 ತಾಲ್ಲೂಕುಗಳನ್ನು ಈ ಯೋಜನೆಗೆ ಆಯ್ಕೆ ಮಾಡಲಾಗಿದೆ. ಆದಾಗ್ಯೂ ಇದರಿಂದ ಕೈಬಿಟ್ಟು ಹೋಗಿರುವ ತಾಲ್ಲೂಕುಗಳನ್ನು ಮುಂದಿನ ಸಾಲಿಗೆ ಸೇರಿಸಿಕೊಳ್ಳಲಾಗುವುದು. ಹಾಗೆಯೇ ಕೃಷಿ ಭಾಗ್ಯ ಯೋಜನೆಯಡಿಯಲ್ಲಿ ಆಯ್ಕೆಯಾದ ಎಲ್ಲಾ ಅರ್ಹ ಫಲಾನುಭವಿ ರೈತರಿಗೆ ಡೀಸೆಲ್ ಪಂಪ್‌ಸೆಟ್ ಅನ್ನು ವಿತರಿಸಲಾಗುವುದೆಂದು ಸದಸ್ಯರಿಗೆ ಮಾಹಿತಿ ನೀಡಿದರು.**

**ಪಹೊ:ಬಿಜಿಪಿ:ಜಿಪಿಆರ್.**

## ರೈತ ಮಕ್ಕಳಿಗೆ ಶಿಕ್ಷಣದಲ್ಲಿ ಮೀಸಲಾತಿ ಹೆಚ್ಚಳ

**ಬೆಂಗಳೂರು, ಫೆಬ್ರವರಿ 10 (ಕರ್ನಾಟಕ ವಾರ್ತೆ)**

ರೈತರ ಹಾಗೂ ಕೃಷಿ ಕಾರ್ಮಿಕರ ಮಕ್ಕಳ ಪದವಿ ಪ್ರವೇಶಕ್ಕೆ ನೀಡಲಾಗಿದ್ದ ಶೇಕಡ 22 ರಷ್ಟು ಮೀಸಲಾತಿಯನ್ನು ನಮ್ಮ ಸರ್ಕಾರವು ಪ್ರಸಕ್ತ ಸಾಲಿನಿಂದ ಶೇಕಡ 40 ಕ್ಕೆ ಹೆಚ್ಚಿಸಿದೆ ಎಂದು ಕೃಷಿ ಸಚಿವ ಭೈರೇಗೌಡ ಅವರು ತಿಳಿಸಿದರು.

ವಿಧಾನಪರಿಷತ್ತಿನಲ್ಲಿಂದು ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಎಂ.ಡಿ. ಲಕ್ಷ್ಮೀನಾರಾಯಣ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ಕೃಷಿ ವಿಶ್ವ ವಿದ್ಯಾಲಯಗಳಲ್ಲಿ ಡಿಪ್ಲೊಮಾ ಬಿ.ಎಸ್.ಸಿ. (ಕೃಷಿ) ಹಾಗೂ ತತ್ಸಮಾನ ಪದವಿಗಳ ಶಿಕ್ಷಣದಲ್ಲಿ ಕೃಷಿಕರ ಮಕ್ಕಳಿಗೆ ಪ್ರವೇಶ ಮೀಸಲಾತಿ ಶೇ 40% ರಷ್ಟು ಹೆಚ್ಚಿಸಿ ಸರ್ಕಾರವು ಈಗಾಗಲೇ ಆದೇಶ ಹೊರಡಿಸಿದೆ. ಆದರೆ ಉದ್ಯೋಗದಲ್ಲಿ ಮೀಸಲಾತಿ ನೀಡುವ ಬಗ್ಗೆ ಸರ್ಕಾರದ ಮುಂದೆ ಯಾವುದೇ ಪ್ರಸ್ತಾಪ ಇರುವುದಿಲ್ಲವೆಂದು ಅವರು ಸ್ಪಷ್ಟಪಡಿಸಿದರು.

ಕೃಷಿ ಉತ್ಪನ್ನಗಳಿಗೆ ಯೋಗ್ಯವಾದ ಬೆಲೆಯನ್ನು ಒದಗಿಸುವ ನಿಟ್ಟಿನಲ್ಲಿ 25 ವಿವಿಧ ಬೆಳೆಗಳಿಗೆ ಕನಿಷ್ಠ ಬೆಂಗಲ ಬೆಲೆಯನ್ನು ನಿಗದಿ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ. ಅಲ್ಲದೆ, ನಮ್ಮ ಸರ್ಕಾರವು ಮೇ 2014 ರಲ್ಲಿ ಪ್ರತ್ಯೇಕವಾದ ಕೃಷಿ ಬೆಲೆ ಆಯೋಗವನ್ನು ರಚಿಸಿದ್ದು, ಈ ಆಯೋಗದ ಮೂಲಕ ಕೃಷಿ ಬೆಳೆಗಳಲ್ಲದೆ ತೋಟಗಾರಿಕಾ ಬೆಳೆಗಳನ್ನು ಸೇರಿದಂತೆ ರೈತರು ಬೆಳೆದ ಎಲ್ಲಾ ಬೆಳೆಗಳಿಗೆ ಯೋಗ್ಯವಾದ ಬೆಲೆಯನ್ನು ಒದಗಿಸಿಕೊಡಲಾಗುವುದೆಂದು ಸಚಿವರು ಭರವಸೆ ನೀಡಿದರು.

ಕೃಷಿ ಪದವಿ ಪಡೆದ ಶೇಕಡ 40 ರಷ್ಟು ವಿದ್ಯಾರ್ಥಿಗಳಲ್ಲಿ ಕೇವಲ ಶೇಕಡ 2 ರಷ್ಟು ವಿದ್ಯಾರ್ಥಿಗಳು ಮಾತ್ರ ಕೃಷಿ ಕ್ಷೇತ್ರವನ್ನು ಆಯ್ದುಕೊಳ್ಳುತ್ತಿರುವುದು ವಿಷಾದನೀಯ ಸಂಗತಿಯಾಗಿದೆ ಎಂದು ಸಚಿವರು ಸದನದ ಗಮನ ಸೆಳೆದಾಗ ಆಡಳಿತ ಪಕ್ಷ ಮತ್ತು ವಿರೋಧ ಪಕ್ಷದ ಸದಸಯರೆಲ್ಲರೂ ಈ ವಿಷಯದಲ್ಲಿ ಚರ್ಚೆಗೆ ಮುಂದಾದರು. ಇದಕ್ಕೆ ಮಧ್ಯೆ ಪ್ರವೇಶಿಸಿದ ಸಭಾಪತಿ ಡಿ.ಹೆಚ್. ಶಂಕರಮೂರ್ತಿ ಅವರು ಈ ವಿಷಯ ಗಂಭೀರವಾದುದು. ರಾಜ್ಯಪಾಲರ ಭಾಷಣದ ಮೇಲೆ ಚರ್ಚೆ ಮಾಡುವ ಸಂದರ್ಭದಲ್ಲಿ ಈ ಕುರಿತು ಚರ್ಚೆ ಮಾಡಲು ಅವಕಾಶ ನೀಡುವುದಾಗಿ ತಿಳಿಸ ಪ್ರಶ್ನೆಗೆ ನೀಡಿದ್ದ ಕಾಲಾವಕಾಶವನ್ನು ಕಡಿತಗೊಳಿಸಿದರು.

ಪಹೊ:ಬಿಜಿಪಿ:ಜಿಪಿಆರ್.

## ಕಲಾಗ್ರಾಮದಲ್ಲಿ 'ಮಲೆಗಳಲ್ಲಿ ಮದುಮಗಳು' ಮೂರನೇ ಸರಣಿ ಪ್ರದರ್ಶನ

**ಬೆಂಗಳೂರು, ಫೆಬ್ರವರಿ 10 (ಕರ್ನಾಟಕ ವಾರ್ತೆ)**

ರಾಷ್ಟ್ರಕವಿ ಕುವೆಂಪು ಅವರ ಜನಪ್ರಿಯ "ಮಲೆಗಳಲ್ಲಿ ಮದುಮಗಳು" ಕಾದಂಬರಿಯ ರಂಗಪ್ರಯೋಗ ಮೂರನೆ ಬಾರಿ ಫೆಬ್ರವರಿ 16 ರಿಂದ ಮಾರ್ಚ್ 21 ರವರೆಗೆ ಪ್ರತಿ ಸೋಮವಾರ, ಬುಧವಾರ, ಶುಕ್ರವಾರ ಹಾಗೂ ಶನಿವಾರ ರಾತ್ರಿ 8-30 ರಿಂದ ಬೆಳಿಗ್ಗೆ 5-30 ರವರೆಗೆ ಬೆಂಗಳೂರು ವಿಶ್ವವಿದ್ಯಾಲಯದ ಕಲಾಗ್ರಾಮದಲ್ಲಿ ನಡೆಯಲಿದೆ.

ರಾಷ್ಟ್ರೀಯ ನಾಟಕ ಶಾಲೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಬೆಂಗಳೂರು ವಿಶ್ವವಿದ್ಯಾಲಯದ ಸಹಯೋಗದಲ್ಲಿ ಈ ರಂಗಪ್ರಯೋಗ ನಡೆಯಲಿದ್ದು, ಇದು ಅಹೋರಾತ್ರಿ ಸತತ ಒಂಭತ್ತು ಗಂಟೆಗಳ ಕಾಲ ನಡೆಯಲಿದೆ.

ರಾಷ್ಟ್ರೀಯ ನಾಟಕ ಶಾಲೆ ಹಾಗೂ ದಕ್ಷಿಣ ಭಾರತದ ರಾಜ್ಯಗಳ ಸುಮಾರು 70 ನಟರು ಈ ನಾಟಕದಲ್ಲಿ ಪಾಲ್ಗೊಳ್ಳಲಿದ್ದು ನಾಟಕವನ್ನು ರಂಗರೂಪಕ್ಕೆ ಕೆ. ವೈ. ನಾರಾಯಣಸ್ವಾಮಿ ಅವರು ಅಳವಡಿಸಿದ್ದು, ರಂಗವಿನ್ಯಾಸವನ್ನು ಶಶಿಧರ ಅಡಪ ಮಾಡಿದ್ದಾರೆ. ಪರಿಕಲ್ಪನೆ ಹಾಗೂ ನಿರ್ದೇಶನವನ್ನು ರಾಷ್ಟ್ರೀಯ ನಾಟಕ ಶಾಲೆ, ಬೆಂಗಳೂರು ಕೇಂದ್ರದ ನಿರ್ದೇಶಕ ಸಿ. ಬಸವಲಿಂಗಯ್ಯ ಹಾಗೂ ಸಂಗೀತ ನಿರ್ದೇಶನವನ್ನು ಖ್ಯಾತ ಸಂಗೀತ ನಿರ್ದೇಶಕ ಹಂಸಲೇಖ ಮಾಡಿದ್ದಾರೆ.

ಈ ನಾಟಕ ಕಲಾಗ್ರಾಮದಲ್ಲಿ 20 ಪ್ರದರ್ಶನಗಳನ್ನು ಕಾಣಲಿದೆ ಹಾಗೂ ಸುಮಾರು 40 ಹಾಡುಗಳು ರಂಗಾಸಕ್ತರ ಮನಸ್ಸನ್ನು ಆಕರ್ಷಿಸಲಿದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕರಾದ ಎನ್. ಆರ್. ವಿಶುಕುಮಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕರಾದ ಕೆ. ಎ. ದಯಾನಂದ್, ಸಂತಕವಿ ಕನಕ ಅಧ್ಯಯನ ಸಂಶೋಧನಾ ಕೇಂದ್ರದ ಸಮನ್ವಯ ಅಧಿಕಾರಿ ಕಾ. ತ. ಚಿಕ್ಕಣ್ಣ ಮುಂತಾದವರು ಈ ರಂಗಪ್ರಯೋಗಕ್ಕೆ ಸಂಪೂರ್ಣ ಸಹಕಾರ ನೀಡಿದ್ದಾರೆ.

ಪಹೊ/ಕವನ/ಕೆಎಂ

## ಖಗೋಳ ಛಾಯಾಚಿತ್ರಗಳ ಪ್ರದರ್ಶನ

**ಬೆಂಗಳೂರು, ಫೆಬ್ರವರಿ 10 (ಕರ್ನಾಟಕ ವಾರ್ತೆ)**

"ಬೆಂಗಳೂರು ಅಸೋಸಿಯೇಷನ್ ಫಾರ್ ಸೈನ್ಸ್ ಸಂಸ್ಥೆಯು ಜವಾಹರ್‌ಲಾಲ್ ನೆಹರು ತಾರಾಲಯದಲ್ಲಿ ಖಗೋಳ ಛಾಯಾಚಿತ್ರಗಳ ಪ್ರದರ್ಶನವನ್ನು ಫೆಬ್ರವರಿ 13, 14 ಮತ್ತು 15 ರಂದು ಆಯೋಜಿಸಿದೆ.

ವೈದ್ಯರು ಹಾಗೂ ಹವ್ಯಾಸಿಖಗೋಳ ಛಾಯಚಿತ್ರಕಾರರಾದ ಡಾ. ಮಂಜುನಾಥ್ ತೆಗೆದ ಚಂದ್ರ ಮತ್ತು ಶುಕ್ರ –ಚಂದ್ರನ ಯುತಿ, ಮಂಗಳ, ಗುರು, ಶನಿ ಇವೇ ಮೊದಲಾದ ಸುಮಾರು 30 ಛಾಯಾಚಿತ್ರಗಳನ್ನು ಪ್ರದರ್ಶಿಸಲಾಗುತ್ತದೆ.".

ಈ ಪ್ರದರ್ಶನವು ಬೆಳಿಗ್ಗೆ 10.30 ರಿಂದ ಸಂಜೆ 4.30 ಗಂಟೆವರೆಗೆ ಸಾರ್ವಜನಿಕರಿಗೆ ಲಭ್ಯವಿರುತ್ತದೆ. ಪ್ರದರ್ಶನದ ಪ್ರವೇಶ ಉಚಿತ. ಹೆಚ್ಚಿನ ಮಾಹಿತಿಗಾಗಿ 2237 9725/2226 6084 ಅಥವಾ www.taralaya.org ಅನ್ನು ಸಂಪರ್ಕಿಸಬಹುದಾಗಿದೆ.

ಪಹೊ:ಬಾಬು:ಜಿಪಿಆರ್.

## EXHIBITION OF ASTRO PHOTOGRAPHS

Bangalore, February 10 (Karnataka Information)

Bangalore Association for Science Education (BASE) is organizing a three-day exhibition of Astro-photographer taken by Dr. Manjunath a Physician and also Amateur Astrophotographer on 13th, 14th and 15th February 2015 at the Jawaharlal Nehru Planetarium. About 30 Asto-photographs like Moon and Venue-Moon conjunction, Mars, Jupiter and Saturn, etc., will be on display.

The exhibition will be open for the public from 10.30 am to 4.30 pm. The entry to the exhibition is free. Further details can be had over phone from the Planetarium office on 2226 6084 / 2237 9725 or Website: www.taralaya.org.

ph.babu.gpr.

## ಸರ್ಕಾರಿ ಕೆಲಸ ದೇವರ ಕೆಲಸ ಎಂದು ನಂಬಿದ್ದವರು ಕೆಂಗಲ್ ಹನುಮಂತಯ್ಯ– ಸಿದ್ಧರಾಮಯ್ಯ

**ಬೆಂಗಳೂರು, ಫೆಬ್ರವರಿ 10 (ಕರ್ನಾಟಕ ವಾರ್ತೆ)**

ರಾಜ್ಯ ರಾಜಕಾರಣದ ಮುತ್ಸದ್ದಿ ಹಾಗೂ ಮಾಜಿ ಮುಖ್ಯಮಂತ್ರಿ ದಿವಂಗತ ಕೆಂಗಲ್ ಹನುಮಂತಯ್ಯ ಅವರ 107ನೇ ಜನ್ಮ ದಿನಾಚರಣೆ ಅಂಗವಾಗಿ ವಿಧಾನಸೌಧದ ಪಶ್ಚಿಮ ದಿಕ್ಕಿನಲ್ಲಿರುವ ಕೆಂಗಲ್ ಹನುಮಂತಯ್ಯ ಅವರ ಪ್ರತಿಮೆ ಬಳಿ ಅವರ ಭಾವಚಿತ್ರಕ್ಕೆ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಇಂದು ಮಾಲಾರ್ಪಣೆ ಮಾಡುವ ಮೂಲಕ ಗೌರವ ಸಲ್ಲಿಸಿದರು.

ದಿವಂಗತ ಕೆಂಗಲ್ ಹನುಮಂತಯ್ಯ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ನಂತರ ಸುದ್ದಿಗಾರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಅವರು ಕೆಂಗಲ್ ಹನುಮಂತಯ್ಯರವರು ರಾಜ್ಯದ ಮುಖ್ಯಮಂತ್ರಿಗಳಾಗಿ ಹಾಗೂ ಕೇಂದ್ರದ ಸಚಿವರಾಗಿ ಸೇವೆ ಸಲ್ಲಿಸಿ ರಾಷ್ಟ್ರದ ಗಮನ ಸೆಳೆದವರು ಎಂದು ಸ್ಮರಿಸಿದರು.

ಸರ್ಕಾರದ ಕೆಲಸ ದೇವರ ಕೆಲಸ ಎಂದು ನಂಬಿದ್ದ ಕೆಂಗಲ್ ಹನುಮಂತಯ್ಯ ಅವರು ವಿಧಾನಸೌಧದ ಪೂರ್ವದ್ವಾರದ ಮೇಲ್ಭಾಗದಲ್ಲಿ ನಾಣ್ನುಡಿಯನ್ನು ಕೆತ್ತಿಸಿರುವುದು ಅವರ ಮನೋಧರ್ಮಕ್ಕೆ ದ್ಯೋತಕವಾಗಿದೆ. ವಿಧಾನಸೌಧ ಇರುವವರೆಗೂ ಅವರ ಹೆಸರು ಶಾಶ್ವತವಾಗಿರುತ್ತದೆ ಎಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಹೇಳಿದರು.

ಕಾನೂನು ಹಾಗೂ ಪಶುಸಂಗೋಪನಾ ಸಚಿವ ಶ್ರೀ ಟಿ.ಬಿ. ಜಯಚಂದ್ರ, ನಗರಾಭಿವೃದ್ಧಿ ಸಚಿವ ಶ್ರೀ ವಿನಯಕುಮಾರ್ ಸೊರಕೆ, ಸರ್ಕಾರದ ಮುಖ್ಯ ಕಾರ್ಯದರ್ಶಿ ಶ್ರೀ ಕೌಶಿಕ ಮುಖರ್ಜಿ, ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ ಶ್ರೀ ನರಸಿಂಹರಾಜು ಸಚಿವಾಲಯದ ಹಿರಿಯ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

ಪಹೊ:ಬಾಬು:ಕೆಪಿಪಿ:ಜಿಪಿಆರ್.

## ಲೂಂಬಾ ಪ್ರತಿಷ್ಠಾನದ ನಿಯೋಗದಿಂದ ವಿಧಾನಸಭಾಧ್ಯಕ್ಷರ ಭೇಟಿ

**ಬೆಂಗಳೂರು, ಫೆಬ್ರವರಿ 10 (ಕರ್ನಾಟಕ ವಾರ್ತೆ**

ಲಂಡನ್ನಿನ ಲೂಂಬಾ ಪ್ರತಿಷ್ಠಾನದ ನಿಯೋಗದ ತಂಡವು ವಿಧಾನಸೌಧದಲ್ಲಿ ವಿಧಾನಸಭೆಯ ಅಧ್ಯಕ್ಷರಾದ ಶ್ರೀ ಕಾಗೋಡು ತಿಮ್ಮಪ್ಪ ಅವರನ್ನು ಇಂದು ಭೇಟಿಮಾಡಿ ಮಾತುಕತೆ ನಡೆಸಿತು.

ನಮ್ಮ ದೇಶದಲ್ಲಿ ವಿಧವೆಯರು ಮತ್ತು ಮಕ್ಕಳು ಹಲವು ಬಗೆಯ ತೊಂದರೆಗೆ ಒಳಗಾಗಿದ್ದಾರೆ ಎಂದ ಶ್ರೀ ಕಾಗೋಡು ತಿಮ್ಮಪ್ಪ ಅವರು ಲೂಂಬಾ ಪ್ರತಿಷ್ಠಾನವು ಇವರ ಪುನಶ್ಚೇತನ ಬಯಸಿ ಕೆಲಸ ಮಾಡುತ್ತಿರುವುದು ಸಂತೋಷದ ವಿಷಯ ಎಂದರು.

ನಿಯೋಗದಲ್ಲಿ ಪಾಲ್ಗೊಂಡ ಶ್ರೀಮತಿ ಅರುಣಾ ಓಸ್ವಾಲ್, ಶ್ರೀ ಕ್ರಿಸ್ಟ್ ಅವರಿಗೆ ಶ್ರೀ ಕಾಗೋಡು ತಿಮ್ಮಪ್ಪ ಅವರು ಮೈಸೂರು ಪೇಟ ತೊಡಿಸಿ, ಶಾಲು ಹೊದಿಸಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಶ್ರೀಮತಿ ಉಮಾಶ್ರೀ, ವಿಧಾನಸಭೆಯ ಕಾರ್ಯದರ್ಶಿ ಶ್ರೀ ಪಿ. ಓಂ ಪ್ರಕಾಶ್, ಅಧೀನ ಕಾರ್ಯದರ್ಶಿ ಶ್ರೀ ಎಂ.ಎಸ್. ಕುಮಾರಸ್ವಾಮಿ ಅವರು ಉಪಸ್ಥಿತರಿದ್ದರು.

ಪಹೊ:ಬಾಬು:ಕಪಿಪಿ:ಜಿಪಿಆರ್.